1654 (2304) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) –ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂದ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದಂತ ಹೊಸದಾಗಿ ಪ್ರೌಢಶಾಲೆಗಳನ್ನು ತೆರೆಯಲು ಉದ್ದೇಶಿಸಲಾಗಿದೆಯೇ,

ಆ) ರಾಜ್ಯಾದ್ಯಂತ ಹೊಸದಾಗಿ ಎಷ್ಟು ಪ್ರೌಢಶಾಲೆಗಳನ್ನು ತೆರೆಯಲಾಗುವುದು,

ಇ) ಹಿಂದುಳಿದ ಪ್ರದೇಶ ಚಾಮರಾಜನಗರ ಜಿಲ್ಲೆಗೆ ಎಷ್ಟು ಹೊಸ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದು?

ಶ್ರೀ ಬಸವರಾಜ್ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಮತ್ತು ಇ) ಆಯಾಯಾ ಸ್ಥಳಗಳ ಶೈಕ್ಷಣಿಕ ಅಗತ್ಯತೆ ಮತ್ತು ಆಯವ್ಯಯದಲ್ಲಿ ಅವಕಾಶದ ಪ್ರಕಾರ ಹಂತ ಹಂತವಾಗಿ ಶಾಲೆಗಳನ್ನು ಮಂಜೂರು ಮಾಡಲಾಗುತ್ತಿದ್ದು, ಇದೊಂದು ಸತತವಾದ ಪ್ರಕ್ರಿಯೆಯಾಗಿದೆ

1655 (2303) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) – ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿವೇಶನ ಪಡೆಯಲು ಇದುವರೆಗೂ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು,

ಆ) ರಾಜ್ಯಾದ್ಯಂತ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು,

ಇ) ಬೆಂಗಳೂರು ನಗರದಲ್ಲಿ ಹೊಸದಾಗಿ ನಿವೇಶನಗಳನ್ನು ಹಂಚಿಕ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ,

ಈ) ಹಾಗಿದ್ದಲ್ಲಿ ಯಾವ ಸ್ಥಳಗಳಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು (ಸಂಪೂರ್ಣ ವಿವರ ನೀಡುವುದು)?